C.C.No.384/2020
PW-3
CW-6

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ. ಎಫ್. ಸಿ., ಪಾವಗಡ ನ್ಯಾಯಾಲಯ**

**ಸಿ.ಸಿ. ಸಂಖ್ಯೆ 384/2020**

**ಪ್ರಾಸಾಃ 04**

**ಚಾಸಾಃ 07**

**ದಿನಾಂಕ 07.05.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿದಾರರ ಹೆಸರು | - | ಎ ವಿ ತಿಮ್ಮರಾಜು |
| ತಂದೆಯ ಹೆಸರು | - | ವೆಂಕಟೇಶಲು |
| ವಯಸ್ಸು | - | 57 ವರ್ಷ |
| ವೃತ್ತಿ | - | ವ್ಯಾಪಾರ |
| ವಾಸ ಸ್ಥಳ | - | ಪಾವಗಡ |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ ರವರಿಂದಃ**

ಸಾಕ್ಷಿಗೆ ಅಮಾನತ್ತು ಮಹಜರ್ ಅನ್ನು ತೋರಿಸಲಾಯಿತು. ಸಾಕ್ಷಿ ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ನಿಪಿ-6(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಯಾವಾಗ ಎಲ್ಲಿ ಮಾಡಿದ್ದೇನೆ ಎಂದು ನನಗೆ ಈಗ ನೆನಪಿಲ್ಲ. ಪೋಲಿಸರ ಕೋರಿಕೆಯ ಮೇರೆಗೆ ಸಹಿ ಮಾಡಿದ್ದೇನೆ. ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ. ಅದರಲ್ಲಿ ಬರೆದ ವಿಚಾರ ನನಗೆ ತಿಳಿದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಕೋರಿದ್ದು ಅನುಮತಿಸಲಾಯಿತು)

ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ

C.C.No.384/2020
PW-3
CW-6

2. ದಿ.09.07.2020 ರಂದು ನನ್ನನ್ನು ಮತ್ತು ಚಾಸಾ-6 ರವರನ್ನು ಪಂಚರನ್ನಾಗಿ ಬರಮಾಡಿಕೊಂಡು ರಾತ್ರಿ 9.30 ರಿಂದ 10.20 ರವರೆಗೆ ಪಾವಗಡ ಪೊಲೀಸ್ ವೃತ್ತ ನಿರೀಕ್ಷಕರ ಕಛೇರಿಯಲ್ಲಿ ಒಂದು ಬೈಕ್ ಮತ್ತು ಮೊಬೈಲ್ ಅನ್ನು ವಶಕ್ಕೆ ಪಡೆದು ನಮ್ಮ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚುಮಾಡಲಾಯಿತು.)

ಓ . ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್. ಸಿ.,
ಪಾವಗಡ

C.C.No.384/2020
PW-3
CW-6